**All India Radio: Bangalore**
**National Bulletin In Kannada**
**02.09.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.09.2025  19.35 p.m.**

**<><><><>**

ಮುಖ್ಯಾಂಶಗಳು

- ಜಾಗತಿಕ ಸೆಮಿಕಂಡಕ್ಟರ್ ಮಾರುಕಟ್ಟೆಯಲ್ಲಿ ಭಾರತದ ಗಮನಾರ್ಹ ಪಾಲು ; ಪ್ರಧಾನಿ ವಿಶ್ವಾಸ
- ಅಫ್ಘಾನ್ ಭೂಕಂಪ ; ೧ ಸಾವಿರಕ್ಕೂ ಹೆಚ್ಚು ಮಂದಿ ಸಾವು ; ೮ ಸಾವಿರಕ್ಕೂ ಹೆಚ್ಚು ಮನೆಗಳು ಸಂಪೂರ್ಣ ಹಾನಿ
- ಭಾರತ ವಿಶ್ವದಲ್ಲೇ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ ; ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಮತ
- ಸುಸ್ಥಿರತೆ ಬದ್ಧತೆ ಪೂರೈಸುವಲ್ಲಿ ಜಿ-೨೦ ರಾಷ್ಟ್ರಗಳಲ್ಲೇ ಭಾರತ ಅತ್ಯುತ್ತಮ - ಸಚಿವ ಪಿಯೂಷ್ ಗೋಯಲ್

<><><><>

ದೇಶವನ್ನು ಸ್ವಾವಲಂಬಿ ಮತ್ತು ಜಾಗತಿಕವಾಗಿ ಸ್ಪರ್ಧಾತ್ಮಕವಾಗಿಸುವ ದೃಢವಾದ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ಭಾರತ ನಿರ್ಮಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಸೆಮಿಕಾನ್ ಇಂಡಿಯಾ-೨೦೨೫ ಉದ್ಘಾಟಿಸಿ ಮಾತನಾಡಿದ ಪ್ರಧಾನಿ, ಜಾಗತಿಕ ಸೆಮಿಕಂಡಕ್ಟರ್ ಮಾರುಕಟ್ಟೆ ಈಗಾಗಲೇ ಆರುನೂರು ಶತಕೋಟಿ ಡಾಲರ್ ತಲುಪಿದೆ ಮತ್ತು ಮುಂಬರುವ ವರ್ಷಗಳಲ್ಲಿ ಇದು ಒಂದು ಟ್ರಿಲಿಯನ್ ಡಾಲರ್ ಅನ್ನು ಮೀರುವ ನಿರೀಕ್ಷೆಯಿದೆ ಎಂದು ಹೇಳಿದರು. ಈ ಜಾಗತಿಕ ಸೆಮಿಕಂಡಕ್ಟರ್ ಮಾರುಕಟ್ಟೆಯಲ್ಲಿ ಭಾರತವು ಗಮನಾರ್ಹ ಪಾಲನ್ನು ಹೊಂದಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಭಾರತವು ದೇಶದೊಳಗೆ ವಿನ್ಯಾಸ, ಉತ್ಪಾದನೆ, ಪ್ಯಾಕೇಜಿಂಗ್ ಮತ್ತು ಹೈಟೆಕ್ ಸಾಧನಗಳನ್ನು ಒಳಗೊಂಡ ಸಮಗ್ರ ಪರಿಸರ ವ್ಯವಸ್ಥೆಯನ್ನು ನಿರ್ಮಿಸುತ್ತಿದೆ. ದೇಶೀಯವಾಗಿ ತಯಾರಿಸಲಾದ ಚಿಪ್‌ಗಳ ಮೂಲಕ ಉದಯೋನ್ಮುಖ ತಂತ್ರಜ್ಞಾನಗಳನ್ನು ಸಬಲೀಕರಣಗೊಳಿಸುವುದು ಭಾರತದ ಗಮನ ಎಂದು ಅವರು ಹೇಳಿದರು.

ಧ್ವನಿ : ನರೇಂದ್ರ ಮೋದಿ (೨೫ ಸೆಕೆಂಡ್‌ಗಳು)

ಈ ವರ್ಷದ ಮೊದಲ ತ್ರೈಮಾಸಿಕದ ಜಿಡಿಪಿ ಅಂಕಿಅಂಶಗಳ ಬಗ್ಗೆ ಮಾತನಾಡಿದ ಪ್ರಧಾನಿ, ಮತ್ತೊಮ್ಮೆ ಭಾರತವು ನಿರೀಕ್ಷೆ, ಅಂದಾಜು ಮತ್ತು ಮುನ್ಸೂಚನೆಯನ್ನು ಮೀರಿಸಿದೆ ಎಂದು ಹೇಳಿದರು. ಭಾರತವು ಶೇಕಡಾ ೭.೮ ರಷ್ಟು ಬೆಳವಣಿಗೆಯ ದರವನ್ನು ಸಾಧಿಸಿದೆ. ಭಾರತದ ತ್ವರಿತ ಬೆಳವಣಿಗೆಯು ಕೈಗಾರಿಕೆಗಳಲ್ಲಿ ಮತ್ತು ಪ್ರತಿಯೊಬ್ಬ ನಾಗರಿಕರಲ್ಲಿ ಹೊಸ ಶಕ್ತಿಯನ್ನು ತುಂಬುತ್ತಿದೆ ಎಂದು ಅವರು ಹೇಳಿದರು. ಇಂದು ಪ್ರಾರಂಭವಾದ ಮೂರು ದಿನಗಳ ಸಮ್ಮೇಳನವು ದೇಶದಲ್ಲಿ ದೃಢವಾದ, ಸ್ಥಿತಿಸ್ಥಾಪಕ ಮತ್ತು ಸುಸ್ಥಿರ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ಮುನ್ನಡೆಸುವತ್ತ ಗಮನಹರಿಸುತ್ತದೆ. ಇದು ಸೆಮಿಕಾನ್ ಇಂಡಿಯಾ ಕಾರ್ಯಕ್ರಮದ ಪ್ರಗತಿ, ಸ್ಮಾರ್ಟ್ ಉತ್ಪಾದನೆ, ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿನ ನಾವೀನ್ಯತೆಗಳು ಮತ್ತು ಕೃತಕ ಬುದ್ಧಿಮತ್ತೆ, ಹೂಡಿಕೆ ಅವಕಾಶಗಳು, ರಾಜ್ಯಮಟ್ಟದ ನೀತಿ ಅನುಷ್ಠಾನ ಇತ್ಯಾದಿಗಳ ಕುರಿತು ಅಧಿವೇಶನಗಳನ್ನು ಒಳಗೊಂಡಿರುತ್ತದೆ. ಪ್ರಧಾನಿ ನಾಳೆ ಸಿಇಒಗಳ ದುಂಡುಮೇಜಿನ ಸಭೆಯಲ್ಲಿಯೂ ಭಾಗವಹಿಸಲಿದ್ದಾರೆ.

<><><><>

ಪೂರ್ವ ಅಫ್ಘಾನಿಸ್ತಾನದಲ್ಲಿ ಸಂಭವಿಸಿದ ಪ್ರಬಲ ಭೂಕಂಪದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೧ ಸಾವಿರದ ೧೨೪ಕ್ಕೆ ಏರಿದ್ದು, ೩ ಸಾವಿರದ ೨೫೧ ಜನರು ಗಾಯಗೊಂಡಿದ್ದಾರೆ ಎಂದು ಇಂದು ವರದಿಗಳು ತಿಳಿಸಿವೆ. ವಿನಾಶಕಾರಿ ಭೂಕಂಪದಿಂದಾಗಿ ಕುನಾರ್ ಪ್ರಾಂತ್ಯದಲ್ಲಿ ೮ ಸಾವಿರಕ್ಕೂ ಹೆಚ್ಚು ಮನೆಗಳು ಸಂಪೂರ್ಣವಾಗಿ ಅಥವಾ ಭಾಗಶಃ ನಾಶವಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪರಿಹಾರ ಮತ್ತು ರಕ್ಷಣಾ ತಂಡಗಳು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಜನರನ್ನು ಹೊರತೆಗೆಯಲು ಕೆಲಸ ಮಾಡುತ್ತಿವೆ ಮತ್ತು ಸಾವುನೋವುಗಳು ಮತ್ತು ಗಾಯಗಳ ಅಂಕಿಅಂಶಗಳನ್ನು ಇನ್ನೂ ಅಂತಿಮಗೊಳಿಸಲಾಗಿಲ್ಲ. ಅಫ್ಘಾನಿಸ್ತಾನದ ಪೂರ್ವ ಭಾಗದಲ್ಲಿ ೬ ತೀವ್ರತೆಯ ಭೂಕಂಪ ಸಂಭವಿಸಿದ್ದು, ನಂಗರ್‌ಹಾರ್ ಪ್ರಾಂತ್ಯದ ರಾಜಧಾನಿ ಜಲಾಲಾಬಾದ್‌ನಿಂದ ಈಶಾನ್ಯಕ್ಕೆ ೨೭ ಕಿಲೋಮೀಟರ್ ದೂರದಲ್ಲಿ ಭೂಕಂಪದ ಕೇಂದ್ರಬಿಂದುವಾಗಿದ್ದು, ೮ ಕಿಲೋಮೀಟರ್ ಆಳದಲ್ಲಿದೆ ಎಂದು ಹೇಳಲಾಗಿದೆ.

<><><><>

ಭಾರತದ ಆರ್ಥಿಕತೆ ಸ್ಥಿರವಾಗಿದೆ ಮತ್ತು ವಿಶ್ವದಲ್ಲಿಯೇ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಇಂದು ಚೆನ್ನೈನಲ್ಲಿ ನಡೆದ

ಸಿಟಿ ಯೂನಿಯನ್ ಬ್ಯಾಂಕಿನ ೧೨೦ನೇ ವಾರ್ಷಿಕೋತ್ಸವದಲ್ಲಿ ಮಾತನಾಡಿದ ಅವರು, ಭಾರತದ ಪ್ರತಿಯೊಬ್ಬ ನಾಗರಿಕನು ಸರ್ಕಾರದ ವಿವಿಧ ಯೋಜನೆಗಳ ಮೂಲಕ ಆರ್ಥಿಕವಾಗಿ ಸಬಲೀಕರಣಗೊಂಡಿದ್ದಾನೆ. ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಬ್ಯಾಂಕಿಂಗ್ ವಲಯವು ಪ್ರಮುಖ ಪಾತ್ರ ವಹಿಸುತ್ತಿದೆ. ಗ್ರಾಮೀಣ-ನಗರ ಅಂತರವನ್ನು ನಿವಾರಿಸಲು ನಾಗರಿಕ ಕೇಂದ್ರಿತ ಯೋಜನೆಗಳನ್ನು ತಂದಿದ್ದಕ್ಕಾಗಿ ಹಣಕಾಸು ಸಚಿವರನ್ನು ಅಭಿನಂದಿಸುವುದಾಗಿ ಹೇಳಿದರು. ಮೊಬೈಲ್‌ನಲ್ಲಿ ಒಂದು ಬಟನ್ ಕ್ಲಿಕ್ ಮಾಡುವ ಮೂಲಕ ಬ್ಯಾಂಕಿಂಗ್ ಸೇವೆಗಳು ಲಭ್ಯವಿದ್ದು, ಜನರು ಬ್ಯಾಂಕುಗಳಲ್ಲಿ ದೀರ್ಘ ಸರತಿ ಸಾಲಿನಲ್ಲಿ ನಿಲ್ಲುವ ಸನ್ನಿವೇಶವನ್ನು ಸಂಪೂರ್ಣವಾಗಿ ತಪ್ಪಿಸಲಾಗಿದೆ. ೫೬ ಕೋಟಿ ಜನಧನ್ ಖಾತೆಗಳನ್ನು ಬ್ಯಾಂಕುಗಳ ಮೂಲಕ ತೆರೆಯಲಾಗಿದೆ. ಗ್ರಾಮೀಣ, ಅರೆ ನಗರ ಮತ್ತು ನಗರ ಪ್ರದೇಶಗಳಲ್ಲಿನ ಹಿಂದುಳಿದವರಿಗೆ ನೇರ ಲಾಭ ವರ್ಗಾವಣೆಯ ಮೂಲಕ ಸರ್ಕಾರಿ ಯೋಜನೆಗಳ ಪ್ರಯೋಜನಗಳನ್ನು ಪಡೆಯಲು ಮತ್ತು ಮಧ್ಯವರ್ತಿಗಳನ್ನು ತಪ್ಪಿಸಲು ಸಹಾಯ ಮಾಡಿದ್ದಕ್ಕಾಗಿ ಬ್ಯಾಂಕುಗಳನ್ನು ಅಭಿನಂದಿಸಿದರು. ರೈತರ ಸಬ್ಸಿಡಿ, ಎಂಎಸ್‌ಎಂಇಗಳಿಗೆ ಸಾಲ, ಮೊಬೈಲ್ ಬ್ಯಾಂಕಿಂಗ್, ಮೈಕ್ರೋ ಸಾಲಗಳು ಮತ್ತು ವಿಮಾ ಉತ್ಪನ್ನಗಳನ್ನು ಪಡೆಯುವಂತಹ ಯೋಜನೆಗಳನ್ನು ಪಟ್ಟಿ ಮಾಡಿದ ರಾಷ್ಟ್ರಪತಿಗಳು, ಡಿಜಿಟಲ್ ಬ್ಯಾಂಕಿಂಗ್‌ನಲ್ಲಿನ ಅಪಾಯಗಳ ಬಗ್ಗೆ ಜನರು ಜಾಗೃತರಾಗಿರಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ನಿಜವಾದ ಜಿಡಿಪಿ ಶೇಕಡಾ ೭.೮ ರಷ್ಟಿದೆ. ರಾಷ್ಟ್ರ ನಿರ್ಮಾಣದಲ್ಲಿ ಖಾಸಗಿ ಬ್ಯಾಂಕುಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹಣಕಾಸು ಸಚಿವರು ಮಾಹಿತಿ ನೀಡಿದರು. ಈ ವರ್ಷದ ಜುಲೈನಲ್ಲಿ ಹಣದುಬ್ಬರವು ಎಂಟು ವರ್ಷಗಳ ಕನಿಷ್ಠ ಮಟ್ಟವಾದ ೧.೫ ಪ್ರತಿಶತಕ್ಕೆ ತಲುಪಿದೆ ಮತ್ತು ಹಣಕಾಸಿನ ಕೊರತೆಯು ೬.೨ ರಿಂದ ೪.೪ ಕ್ಕೆ ಇಳಿದಿದೆ ಎಂದು ಹೇಳಿದ ಅವರು, ಇಪಿಎಫ್‌ಒ ೨೨ ಲಕ್ಷ ಹೊಸ ಸದಸ್ಯರನ್ನು ನೋಂದಾಯಿಸಿದೆ ಮತ್ತು ಜನಧನ್ ಖಾತೆಗಳಲ್ಲಿ ಶೇಕಡಾ ೬೭ ರಷ್ಟು ಗ್ರಾಮೀಣ ಮತ್ತು ಅರೆ ನಗರ ಪ್ರದೇಶಗಳಿಂದ ಬಂದಿದ್ದು, ಶೇಕಡಾ ೫೬ರಷ್ಟು ಮಹಿಳೆಯರಿದ್ದಾರೆ ಎಂದು ಹೇಳಿದರು.

<><><>

ಭಾರತವು ತನ್ನ ಸುಸ್ಥಿರತೆಯ ಬದ್ಧತೆಗಳನ್ನು ಪೂರೈಸುವಲ್ಲಿ ಜಿ-೨೦ ರಾಷ್ಟ್ರಗಳಲ್ಲೇ ಅತ್ಯುತ್ತಮವಾಗಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಸಿಐಐನ ೨೦ನೇ ಜಾಗತಿಕ ಸುಸ್ಥಿರತೆಯ

ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸಿಒಪಿ-೨೧ ಅನ್ನು ಯಶಸ್ವಿಗೊಳಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ನಿರ್ಣಾಯಕ ಪಾತ್ರ ವಹಿಸಿದ್ದಾರೆ ಎಂದು ಹೇಳಿದರು. ಭಾರತವು ತನ್ನ ಸುಸ್ಥಿರತೆಯ ಗುರಿಗಳಿಗೆ ಬದ್ಧವಾಗಿದೆ. ೨೦೧೪ ರಿಂದ ನವೀಕರಿಸಬಹುದಾದ ಇಂಧನ ಗುರಿಗಳನ್ನು ಐದು ಪಟ್ಟು ಹೆಚ್ಚಿಸಿದೆ ಮತ್ತು 'ಒಂದು ರಾಷ್ಟ್ರ, ಒಂದು ಗ್ರಿಡ್' ತತ್ವದಡಿಯಲ್ಲಿ ರಾಷ್ಟ್ರೀಯ ಅಂತರ್ಸಂಪರ್ಕಿತ ಗ್ರಿಡ್ ಅನ್ನು ಯಶಸ್ವಿಯಾಗಿ ರಚಿಸಿದೆ ಎಂದು ಸಚಿವರು ಹೇಳಿದರು. ಈಗಾಗಲೇ ಶೇಕಡಾ ೫೦ ರಷ್ಟು ನವೀಕರಿಸಬಹುದಾದ ಇಂಧನ ಸಾಮರ್ಥ್ಯವನ್ನು ಸಾಧಿಸಲಾಗಿದೆ. ೨೦೩೦ ರ ವೇಳೆಗೆ ಭಾರತವು ೫೦೦ ಗಿಗಾವ್ಯಾಟ್ ತಲುಪುವ ಗುರಿಯನ್ನು ಹೊಂದಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಭಾರತವು ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಹೊರಹೊಮ್ಮಿದೆ ಮತ್ತು ಹವಾಮಾನ ಕ್ರಮದ ಕುರಿತು ಜಾಗತಿಕ ಪ್ರಯತ್ನಗಳನ್ನು ಮುನ್ನಡೆಸುತ್ತಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ೨೧ನೇ ಜಾಗತಿಕ ಸುಸ್ಥಿರತೆ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸ್ಥಿತಿಸ್ಥಾಪಕತ್ವ, ಪುನರುತ್ಪಾದನೆ ಮತ್ತು ಜವಾಬ್ದಾರಿಯನ್ನು ಅಳವಡಿಸಿಕೊಳ್ಳುವ ಮೂಲಕ ಹೆಚ್ಚು ಸುಸ್ಥಿರ ಪ್ರಪಂಚದತ್ತ ಒಂದು ಮಾರ್ಗ ರೂಪಿಸುವ ಬಗ್ಗೆ ಒತ್ತಿ ಹೇಳಿದರು.

<><><><>

ಕೇಂದ್ರ ಮೀಸಲು ಪೊಲೀಸ್ ಪಡೆಯು ರಾಷ್ಟ್ರೀಯತೆ, ಸೇವೆ ಮತ್ತು ಬದ್ಧತೆಯ ಸಂಕೇತವಾಗಿದೆ. ಕೇಂದ್ರ ಮೀಸಲು ಪೊಲೀಸ್ ಪಡೆ ಇಲ್ಲದೇ ದೇಶದಲ್ಲಿ ಎಲ್ಲಿಯೂ ಚುನಾವಣೆಗಳನ್ನು ನಡೆಸುವುದು ಕಷ್ಟಸಾಧ್ಯ ಎಂದು ಕೇಂದ್ರ ಗೃಹ ವ್ಯವಹಾರಗಳ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಹೇಳಿದ್ದಾರೆ. ಕರ್ನಾಟಕ ರಾಜ್ಯದ ಬೆಳಗಾವಿ ಜಿಲ್ಲೆ ಜಾಂಬೋಟಿ ಬಳಿಯ ತೊರಾಳಿಯ ಸಿ.ಆರ್.ಪಿ.ಎಫ್. ಸಂಸ್ಥೆಯ ಕೋಬ್ರಾ ಜಂಗಲ್ ಯುದ್ಧ ತರಬೇತಿ ಶಾಲೆ, ಎ.ವಿ.ಹಾಲ್ ಕಟ್ಟಡ, ಎಸ್‌ಒಗಳ ಮೆಸ್ ಮತ್ತು ೧೮೦ ಯೋಧರಿಗೆ ಬ್ಯಾರಕ್‌ಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><><><>

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಹತ್ತಿಯನ್ನು ಸುಲಭವಾಗಿ ಖರೀದಿಸಲು ಅನುಕೂಲವಾಗುವಂತೆ ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಇಂದು ಕಪಾಸ್ ಕಿಸಾನ್ ಅಪ್ಲಿಕೇಶನ್ ಅನ್ನು ಪ್ರಾರಂಭಿಸಿದರು.

<><><><>

ತೆಲಂಗಾಣದಲ್ಲಿ ನಡೆದ ರಾಜಕೀಯ ಬೆಳವಣಿಗೆಯಲ್ಲಿ, ಭಾರತ ರಾಷ್ಟ್ರ ಸಮಿತಿ -ಬಿಆರ್‌ಎಸ್ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಕೆ. ಚಂದ್ರಶೇಖರ ರಾವ್ ಅವರು, ತಮ್ಮ ಪುತ್ರಿ ಮತ್ತು ವಿಧಾನ ಪರಿಷತ್ ಸದಸ್ಯೆ ಕೆ. ಕವಿತಾ ಅವರನ್ನು ಪಕ್ಷ ವಿರೋಧಿ ಚಟುವಟಿಕೆಗಳಿಗಾಗಿ ಪಕ್ಷದಿಂದ ಅಮಾನತುಗೊಳಿಸಿದ್ದಾರೆ. ಪಕ್ಷದ ಶಿಸ್ತಿನ ಉಸ್ತುವಾರಿಗಳಾದ ಟಿ. ರವೀಂದರ್ ರಾವ್ ಮತ್ತು ಸೋಮ ಭರತ್ ಕುಮಾರ್ ಇಂದು ಹೈದರಾಬಾದ್‌ನಲ್ಲಿ ಘೋಷಿಸಿದ ಈ ನಿರ್ಧಾರವು ಅವರ ಇತ್ತೀಚಿನ ನಡವಳಿಕೆಯನ್ನು ಪಕ್ಷದ ಹಿತಾಸಕ್ತಿಗಳಿಗೆ ಹಾನಿಕರ ಎಂದು ಉಲ್ಲೇಖಿಸಿದೆ.

<><><><>

ನವದೆಹಲಿಯಲ್ಲಿ ಇಂದು ಹನ್ನೆರಡು ದಿನಗಳ ಅಖಿಲ ಭಾರತ ಥಾಲ್ ಸೈನಿಕ್ ಶಿಬಿರ ಉದ್ಘಾಟನೆಗೊಂಡಿತು. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಪ್ರತಿನಿಧಿಸುವ ಹದಿನೇಳು ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ - ಎನ್‌ಸಿಸಿ ನಿರ್ದೇಶನಾಲಯಗಳಿಂದ ಸುಮಾರು ಒಂದು ಸಾವಿರದ ೫೦೦ ಕೆಡೆಟ್‌ಗಳು ಶಿಬಿರದಲ್ಲಿ ಭಾಗವಹಿಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><><>

ಅಫ್ಘಾನ್ ಯುವಕರಲ್ಲಿ ಉನ್ನತ ಶಿಕ್ಷಣ ಬೆಂಬಲಿಸುವ ಮಹತ್ವದ ಹೆಜ್ಜೆಯಾಗಿ ಭಾರತವು ಪ್ರಸಕ್ತ ಶೈಕ್ಷಣಿಕ ವರ್ಷಕ್ಕೆ ಅಫ್ಘಾನ್ ಪ್ರಜೆಗಳಿಗೆ ೧ ಸಾವಿರ ಇ-ವಿದ್ಯಾರ್ಥಿವೇತನ ಘೋಷಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>